**All India Radio: Bangalore**
**Regional Bulletin In Kannada**
**30.01.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**30.01.2026 / 2.30 p.m.**

**<><><><>**

ಮುಖ್ಯಾಂಶಗಳು

1. ಸದನದಲ್ಲಿ ಆಕ್ಷೇಪಾರ್ಹ ಪದ ಬಳಸಿದರೆ ನಿರ್ದಾಕ್ಷಿಣ್ಯ ಕ್ರಮ ; ಮೇಲ್ಮನೆ ಸದಸ್ಯರಿಗೆ ಸಭಾಪತಿ ಬಸವರಾಜ ಹೊರಟ್ಟಿ ಎಚ್ಚರಿಕೆ
2. ವಿಧಾನಸಭೆಯಲ್ಲಿ ರಾಜ್ಯಪಾಲರ ಭಾಷಣದ ಮೇಲೆ ಚರ್ಚೆ ; ಪ್ರತಿಪಕ್ಷ ಸದಸ್ಯರಿಂದ ಸರ್ಕಾರದ ವಿರುದ್ಧ ಅಸಮಾಧಾನ
3. ಹಳ್ಳಿಗಳ ಜನರು ಆರ್ಥಿಕವಾಗಿ, ರಾಜಕೀಯವಾಗಿ ಸ್ವಾವಲಂಬಿಗಳಾಗಬೇಕು - ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ
4. ಕೊಪ್ಪಳದಲ್ಲಿ ಕಿಮ್ಸ್ ಆಡಳಿತಾಧಿಕಾರಿ ನಿವಾಸದ ಮೇಲೆ ಲೋಕಾಯುಕ್ತ ದಾಳಿ ; ದಾಖಲೆಗಳ ಪರಿಶೀಲನೆ

<><><><>

ಸದನದಲ್ಲಿ ಆಕ್ಷೇಪಾರ್ಹ ಮತ್ತು ಅವಮಾನಕರ ಮಾತುಗಳನ್ನು ಆಡಿದರೆ ಹಾಗೂ ಪದಗಳನ್ನು ಉಲ್ಲೇಖಿಸಿದರೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಸಭಾಪತಿ ಬಸವರಾಜ ಹೊರಟ್ಟಿ ಎಚ್ಚರಿಕೆ ನೀಡಿದ್ದಾರೆ. ಮೇಲ್ಮನೆಯಲ್ಲಿಂದು ಕಲಾಪ ಆರಂಭವಾಗುತ್ತಿದ್ದಂತೆಯೇ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಷಯ ಪ್ರಸ್ತಾಪಿಸಿ ಸದಸ್ಯರಾದ ಬಿ.ಕೆ.ಹರಿಪ್ರಸಾದ್ ಮಾತುಗಳಿಂದ ಸದನಕ್ಕೆ ನೋವಾಗಿದ್ದು, ಅವರನ್ನು ಅಮಾನತು ಮಾಡಬೇಕು ಎಂದು ಆಗ್ರಹಿಸಿದರು. ಈ ವೇಳೆ ಸಭಾಪತಿ ಮಧ್ಯ ಪ್ರವೇಶಿಸಿ ಸದನದಲ್ಲಿ ಈ ರೀತಿಯ ಘಟನೆಗಳು ಸಂಭವಿಸಬಾರದು. ಕಾರ್ಯಕಲಾಪಕ್ಕೆ ಅವಕಾಶ ನೀಡಿ ಎಂದು ಸದನಕ್ಕೆ ಸೂಚಿಸಿದರು. ಬಳಿಕ, ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಅನುಷ್ಠಾನ ಸೇರಿದಂತೆ ಎರಡು ಪ್ರಮುಖ ಲೆಕ್ಕಪರಿಶೋಧನಾ ವರದಿಗಳನ್ನು ಮೇಲ್ಮನೆಯಲ್ಲಿ ಮಂಡನೆ ಮಾಡಲಾಯಿತು. ಸಭಾನಾಯಕ

ಎನ್.ಎಸ್.ಭೋಸ್‌ರಾಜ್, ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ ವರದಿ ಮಂಡಿಸಿದರು.

<><><>

ವಿಧಾನಸಭೆ ಕಲಾಪದಲ್ಲಿಂದು ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲೆ ಚರ್ಚೆ ನಡೆಯುತ್ತಿದೆ. ಈ ನಡುವೆ ಸಭಾಧ್ಯಕ್ಷ ಯು.ಟಿ.ಖಾದರ್ ಸದನದಲ್ಲಿ ಹುತಾತ್ಮರಿಗೆ ಗೌರವ ಸಲ್ಲಿಸುವ ನಿರ್ಣಯ ಮಂಡಿಸಿದರು. ಬಳಿಕ ಸದಸ್ಯರು ಹುತಾತ್ಮರ ದಿನಾಚರಣೆ ಅಂಗವಾಗಿ ಒಂದು ನಿಮಿಷ ಮೌನಾಚರಣೆ ಮಾಡುವ ಮೂಲಕ ಗೌರವ ಸಲ್ಲಿಸಿದರು. ಬಿಜೆಪಿಯ ಎಸ್.ಸುರೇಶ್‌ಕುಮಾರ್, ರಾಜ್ಯಪಾಲರ ಭಾಷಣದ ಮೇಲೆ ಚರ್ಚೆ ನಡೆಸಿ ಸರ್ಕಾರದ ವೈಫಲ್ಯಗಳನ್ನು ಸದನದ ಮುಂದೆ ತೆರೆದಿಟ್ಟಿದ್ದಾರೆ. ಈ ವೇಳೆ ಕಾಂಗ್ರೆಸ್‌ನ ಶರತ್ ಬಚ್ಚೇಗೌಡ ಸರ್ಕಾರದ ಸಾಧನೆಯನ್ನು ಸಮರ್ಥಿಸಿಕೊಂಡಿದ್ದಾರೆ. ಸದಸ್ಯ ಬಸನಗೌಡ ಪಾಟೀಲ್ ಯತ್ನಾಳ್ ಮಾತನಾಡಿ, ಕೇಂದ್ರ ಸರ್ಕಾರ ರಾಜ್ಯದ ಅಭಿವೃದ್ಧಿಗೆ ಅಪಾರ ಪ್ರಮಾಣದ ಹಣ ನೀಡಿದೆ. ಆದರೂ ಕೇಂದ್ರ ಸರ್ಕಾರದ ವಿರುದ್ಧ ರಾಜ್ಯ ಸರ್ಕಾರ ಅಪ ಪ್ರಚಾರ ಮಾಡುತ್ತಿದೆ ಎಂದು ಹೇಳಿದರು. ಕೇಂದ್ರದಂತೆ ರಾಜ್ಯದಲ್ಲೂ ನರೇಂದ್ರ ಮೋದಿ ಸರ್ಕಾರದಂತೆ ಮಾದರಿ ಸರ್ಕಾರ ಬಂದರೆ ಸಮಗ್ರ ಅಭಿವೃದ್ಧಿ ಸಾಧ್ಯ ಎಂದರು. ರಾಜ್ಯದಲ್ಲಿ ೨ ಲಕ್ಷ ೮೨ ಸಾವಿರ ಹುದ್ದೆಗಳು ಖಾಲಿಯಿದ್ದು, ಅದರ ಭರ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

<><><>

ಆರ್ಥಿಕವಾಗಿ, ಶೈಕ್ಷಣಿಕವಾಗಿ ಹಾಗೂ ರಾಜಕೀಯವಾಗಿ ಹಳ್ಳಿಗಳ ಜನರು ಸ್ವಾವಲಂಬಿಗಳಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ಹುತಾತ್ಮರ ದಿನಾಚರಣೆ ಪ್ರಯುಕ್ತ ವಿಧಾನಸೌಧದ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹತ್ಮಾಗಾಂಧೀಜಿ ದೇಶಕ್ಕೆ ನೀಡಿದ ಕೊಡುಗೆಯನ್ನು ಇಂದು ಸ್ಮರಿಸಲಾಗುತ್ತಿದ್ದು, ರಾಜ್ಯದ ಸುಮಾರು ೬ ಸಾವಿರ ಪಂಚಾಯಿತಿಗಳಿಗೆ ಮಹತ್ಮಾಗಾಂಧೀಜಿ ಹೆಸರು ಇಡಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಗುತ್ತಿಗೆದಾರರ ಬಾಕಿ ಬಿಲ್ಲುಗಳ ಪಾವತಿ ಬಗ್ಗೆ ಪ್ರತಿಕ್ರಿಯಿಸಿದ ಅವರು, ಹಿಂದಿನ ಬಿಜೆಪಿ ಸರ್ಕಾರ ಬಾಕಿ ಬಿಲ್ಲುಗಳನ್ನು ಉಳಿಸಿಕೊಂಡಿರುವುದಾಗಿ ಸ್ಪಷ್ಟಪಡಿಸಿದ್ದಾರೆ.

<><><>

ರಾಜ್ಯದ ವಿವಿಧೆಡೆ ಇಂದು ಸರ್ವೋದಯ ದಿನ ಆಚರಿಸಲಾಯಿತು. ಬೆಂಗಳೂರಿನಲ್ಲಿ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಹಾಗೂ ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಆಯುಕ್ತ ರಾಜೇಂದ್ರ ಚೋಳನ್ ಮಹಾತ್ಮ ಗಾಂಧೀಜಿ ರಸ್ತೆಯಲ್ಲಿರುವ ಗಾಂಧೀಜಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಪುಷ್ಪ ನಮನ ಸಲ್ಲಿಸಿದರು. ಮಹಾತ್ಮ ಗಾಂಧಿ ಪುಣ್ಯಸ್ಮರಣೆಯ ದಿನವಾದ ಇಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಹುತಾತ್ಮರ ದಿನಾಚರಣೆಯನ್ನು ವಿವಿಧೆಡೆಗಳಲ್ಲಿ ಆಚರಿಸಲಾಯಿತು. ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ವಿವಿಧ ಸಂಘಟನೆಗಳಿಂದ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗಾಂಧೀಜಿಯವರ ಅಹಿಂಸಾ ತತ್ವ ತ್ಯಾಗ ಹಾಗೂ ಹೋರಾಟಗಳನ್ನು ಸ್ಮರಿಸಲಾಯಿತು. ಮಡಿಕೇರಿಯಲ್ಲಿಂದು ಹುತಾತ್ಮರ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಕೊಡಗು ಜಿಲ್ಲಾಡಳಿತ ಹಾಗೂ ಸರ್ವೋದಯ ಸಮಿತಿ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಚಿತಾಭಸ್ಮವನ್ನು ಮಡಿಕೇರಿಯ ಜಿಲ್ಲಾ ಖಜಾನೆ ಕಚೇರಿಯಿಂದ ಮೆರವಣಿಗೆಯಲ್ಲಿ ಪೊಲೀಸ್ ಗೌರವ ರಕ್ಷೆಯೊಂದಿಗೆ, ಗಾಂಧಿ ಮೈದಾನಕ್ಕೆ ಕೊಂಡೊಯ್ಯಲಾಯಿತು. ಮೂರೂ ಧರ್ಮಗಳ ಧರ್ಮಗುರುಗಳಿಂದ ಸರ್ವಧರ್ಮ ಪ್ರಾರ್ಥನೆ ನೆರವೇರಿತು. ಸ್ವಾತಂತ್ರ್ಯ ಯೋಧರ ತ್ಯಾಗ ಬಲಿದಾನ ಹೋರಾಟ ಎಲ್ಲರಿಗೂ ಮಾರ್ಗದರ್ಶನವಾಗಿದ್ದು, ಪ್ರತಿದಿನ ಹೋರಾಟಗಾರರ ತ್ಯಾಗ ಮತ್ತು ಬಲಿದಾನವನ್ನು ನೆನಪಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ವಿಜಯಪುರ ಜಿಲ್ಲಾಧಿಕಾರಿ ಡಾ.ಆನಂದ.ಕೆ ತಿಳಿಸಿದ್ದಾರೆ. ಸರ್ವೋದಯ ದಿನಾಚರಣೆ ಅಂಗವಾಗಿ ಬೆಂಗಳೂರಿನ ಡಾ. ಮನ್‌ಮೋಹನ್ ಸಿಂಗ್ ನಗರ ವಿಶ್ವವಿದ್ಯಾನಿಲಯದ ಗಾಂಧಿ ಅಧ್ಯಯನ ಕೇಂದ್ರದ ವತಿಯಿಂದ ಸೆಂಟ್ರಲ್ ಕಾಲೇಜಿನ ಜ್ಯೋತಿ ಸಭಾಂಗಣದಲ್ಲಿ ಗಾಂಧಿ, ಸಂಗೀತ, ನಾಗರಿಕತೆಯ ಬಹುತ್ವ ಕುರಿತು ಉಪನ್ಯಾಸ ನಡೆಯಿತು.

<><><><>

ಅಕ್ರಮ ಆಸ್ತಿ ಗಳಿಕೆ ಆರೋಪಕ್ಕೆ ಸಂಬಂಧಿಸಿದಂತೆ ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆ-ಕಿಮ್ಸ್ ಆಡಳಿತಾಧಿಕಾರಿಗೆ ಸಂಬಂಧಿಸಿದ ಹಲವು ಸ್ಥಳಗಳಲ್ಲಿ ಇಂದು ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಕೊಪ್ಪಳ ಜಿಲ್ಲೆಯ ಆರು ಸ್ಥಳಗಳಲ್ಲಿ ಏಕಕಾಲದಲ್ಲಿ ದಾಳಿ ನಡೆದಿದ್ದು, ಅಧಿಕಾರಿಗಳು ಆಸ್ತಿ ಮತ್ತು ಹಣಕಾಸಿನ ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ. ಕೊಪ್ಪಳ

ಲೋಕಾಯುಕ್ತ ಉಪ ಪೊಲೀಸ್ ವರಿಷ್ಠಾಧಿಕಾರಿ ಲೋಕೇಶ್ ನೇತೃತ್ವದಲ್ಲಿ ನಡೆದ ದಾಳಿಯಲ್ಲಿ ೩೦ಕ್ಕೂ ಅಧಿಕಾರಿಗಳು ಭಾಗಿಯಾಗಿದ್ದಾರೆ.

<><><>

ಕೇಂದ್ರ ಸರ್ಕಾರ ಬಜೆಟ್‌ನಲ್ಲಿ ರಾಜ್ಯಕ್ಕೆ ಮಲತಾಯಿ ಧೋರಣೆ ತೋರುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ. ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದರ ಬಗ್ಗೆ ಬಿಜೆಪಿ ಸಂಸದರು, ಕೇಂದ್ರ ಸಚಿವರು ಯಾರೂ ದನಿ ಎತ್ತುತ್ತಿಲ್ಲ ಎಂದು ತಿಳಿಸಿದ್ದಾರೆ. ಇದೇ ವೇಳೆ ನರೇಗಾ ರಹಿತ ಯೋಜನೆಯಿಂದ ಯಾರಿಗೂ ಅನುಕೂಲವಿಲ್ಲ ಎಂದು ಹೇಳಿದ್ದಾರೆ. ಶಿವಮೊಗ್ಗ ಜಿಲ್ಲೆಯಲ್ಲಿ ಮಂಗನ ಕಾಯಿಲೆಯಿಂದ ಸಾವನ್ನಪ್ಪುತ್ತಿರುವವರಿಗೆ ಸರ್ಕಾರದಿಂದ ಪರಿಹಾರ ನೀಡುವ ಬಗ್ಗೆ ಪರಿಶೀಲಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಮಂಗಳೂರು ಸಮೀಪದ ಗುರುಪುರದಲ್ಲಿ ಕಲಾಸೌಧ ನಿರ್ಮಾಣಕ್ಕಾಗಿ ೦.೫ ಎಕರೆ ಜಾಗವನ್ನು ಮಂಜೂರು ಮಾಡಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾ ಸಾಹಿತ್ಯ ಪರಿಷತ್ತು ಮಂಗಳೂರು ತಾಲ್ಲೂಕು ಘಟಕಕ್ಕೆ ಸಭಾಂಗಣ, ಕಚೇರಿ ನಿರ್ಮಾಣದ ಉದ್ದೇಶಕ್ಕೆ ಈ ಜಮೀನು ಮಂಜೂರು ಮಾಡಲಾಗಿದೆ. ಮಂಜೂರಾದ ಜಮೀನನ್ನು ಪರಭಾರೆ ಮಾಡಬಾರದು, ನಿಶ್ಚಿತವಾದ ಉದ್ದೇಶಕ್ಕೆ ಮಾತ್ರ ಬಳಕೆ ಮಾಡಬೇಕು ಸೇರಿದಂತೆ ಹಲವು ನಿಯಮ ರೂಪಿಸಿ ಮಂಜೂರು ಮಾಡಲಾಗಿದೆ. ಕಟ್ಟಡ ನಿರ್ಮಾಣಕ್ಕೂ ಸರ್ಕಾರ ಹಣಕಾಸಿನ ನೆರವು ನೀಡಲಾಗುವುದು ಎಂದು ಸಚಿವರು ಭರವಸೆ ನೀಡಿದ್ದಾರೆ.

<><><>

ಐದು ಕೋಟಿ ೫೦ ಲಕ್ಷ ರೂಪಾಯಿ ವೆಚ್ಚದಲ್ಲಿ ಮಂಡ್ಯ ನಗರದ ಸರ್.ಎಂ.ವಿಶ್ವೇಶ್ವರಯ್ಯ ಒಳಾಂಗಣ ಕ್ರೀಡಾಂಗಣದ ಆವರಣದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಶಂಕುಸ್ಥಾಪನೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕನ್ನಡದ ಐಕ್ಯತೆಯ ಧ್ಯೋತಕವಾಗಿ ನಮ್ಮ ಸಾಹಿತ್ಯ, ಸಂಸ್ಕೃತಿ, ಪರಂಪರೆಯನ್ನು ಬಿಂಬಿಸುವ ಹಾಗೂ ನಾಡು-ನುಡಿಯ ಬಗೆಗಿನ ಅಭಿಮಾನವನ್ನು ಜನ

ಮನದಲ್ಲಿ ಮೂಡಿಸುವ ನಿಟ್ಟಿನಲ್ಲಿ  ಕನ್ನಡ ಭವನ ನಿರ್ಮಿಸುವ ಉದ್ದೇಶಕ್ಕಾಗಿ ಜಾಗವನ್ನು ಗುರುತಿಸಲಾಗಿದೆ ಎಂದು ಹೇಳಿದ್ದಾರೆ. ಈ ಸಂದರ್ಭದಲ್ಲಿ ಶಾಸಕರಾದ ರವಿಕುಮಾರ್, ದರ್ಶನ್ ಪುಟ್ಟಣ್ಣಯ್ಯ, ಜಿಲ್ಲಾಧಿಕಾರಿ ಡಾ ಕುಮಾರ, ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><><>

ಆಯುಷ್ಮಾನ್ ಭಾರತ್ ಯೋಜನೆಯಡಿ ನೋಂದಣಿಯಾದ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಯೋಜನೆಯಡಿ ಚಿಕಿತ್ಸೆ ನಿರಾಕರಿಸುವಂತಿಲ್ಲ ಎಂದು ದಕ್ಷಿಣ ಕನ್ನಡ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಚ್.ಆರ್. ತಿಮ್ಮಯ್ಯ ತಿಳಿಸಿದ್ದಾರೆ. ಈ ಬಗ್ಗೆ ಆಸ್ಪತ್ರೆಗಳಿಗೆ ಪತ್ರ ಬರೆಯಲಾಗಿದೆ ಎಂದು ಅವರು ಹೇಳಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಸ್ಪತ್ರೆಗೆ ತೆರಳಿದಾಗ ಆಯುಷ್ಮಾನ್ ಕಾರ್ಡ್ ಅಗತ್ಯವಿಲ್ಲ. ಪಡಿತರ ಚೀಟಿ, ಆಧಾರ್ ಕಾರ್ಡ್, ಆಧಾರ್ ಲಿಂಕ್ ಆಗಿರುವ ಮೊಬೈಲ್ ಫೋನ್ ಇದ್ದರೆ ಸಾಕು ಎಂದು ಮಾಹಿತಿ ನೀಡಿದ್ದಾರೆ. ಜಿಲ್ಲೆಯಲ್ಲಿ ಎನ್ಎಚ್ಎಂ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ನೌಕರರ ಮೂರು ತಿಂಗಳ ಬಾಕಿ ವೇತನ ಒಟ್ಟು ೯ ಕೋಟಿ ೬೭ ಲಕ್ಷ ರೂಪಾಯಿ ಬಿಡುಗಡೆಗೊಂಡಿದೆ ಎಂದು ತಿಳಿಸಿದ್ದಾರೆ.

<><><>

ಕೋಲಾರ ನಗರದ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದಲ್ಲಿ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಅಂಗವಾಗಿ ರಸ್ತೆ ಸುರಕ್ಷತಾ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ನ್ಯಾಯಾಧೀಶ ಆರ್.ನಟೇಶ್ ಮಾತನಾಡಿ, ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಜೀವ ರಕ್ಷಿಸಿಕೊಳ್ಳಬೇಕು. ನಾಲ್ಕು ಚಕ್ರ ವಾಹನ ಸವಾರರು ಚಾಲನೆಯ ವೇಳೆ ಸೀಟ್ ಬೆಲ್ಟ್ ಧರಿಸುವುದು ಕಡ್ಡಾಯ ಎಂದು ತಿಳಿಸಿದ್ದಾರೆ.

<><><>

ಕರ್ನಾಟಕ, ಗೋವಾ, ಮಹಾರಾಷ್ಟ್ರ ಸೇರಿದಂತೆ ಲಕ್ಷಾಂತರ ಭಕ್ತರ ಆರಾಧ್ಯ ದೇವತೆ ಸವದತ್ತಿಯ ಯಲ್ಲಮ್ಮನ ಗುಡ್ಡದಲ್ಲಿ ಬನದ ಹುಣ್ಣಿಮೆಯನ್ನು ಯಶಸ್ವಿಗೊಳಿಸಲು ಅಭಿವೃದ್ಧಿ ಪ್ರಾಧಿಕಾರ ಸಕಲ ಸೌಲಭ್ಯಗಳೊಂದಿಗೆ ಸಜ್ಜಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>